# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್.ಎಫ್.ಸಿ. ನ್ಯಾಯಾಲಯ, ಇಂಡಿ.

**OS No**.543/2022

**PW**:3

**ದಿನಾಂಕ 03.03.2026 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ 7 ನೇ ಪ್ರತಿವಾದಿ ಪರ ಶ್ರೀ.ಎಸ್.ಕೆ.ಟಿ. ವಕೀಲರಿಂದ:**

ನನ್ನ ಸ್ವಂತ ಊರು ವಿಜಯಪುರ. ನಾನು ದಾವಾ ಆಸ್ತಿಯನ್ನು ನೋಡಿರುತ್ತೇನೆ. ದಾವಾ ಆಸ್ತಿಯ ಚಕಬಂದಿ ನನಗೆ ಹೇಳಲು ಬರುವುದಿಲ್ಲ. ದಾವಾ ಆಸ್ತಿಯು ಈಗ ಯಾರ ಹೆಸರಿನಲ್ಲಿ ಇರುತ್ತದೆ ಎಂದು ನನಗೆ ಹೇಳಲು ಬರುವುದಿಲ್ಲ. ನನ್ನ ಸಾಕ್ಷ್ಯಾಪ್ರಮಾಣ ಪತ್ರವನ್ನು ಬರೆಯಲು ನಮ್ಮ ಮಾಮಾ ಮಾಹಿತಿ ನೀಡಿರುತ್ತಾರೆ. ನಮ್ಮ ಮಾಮಾ ಎಂದರೆ 1 ನೇ ಪ್ರತಿವಾದಿ ಎಂದರೆ ಸರಿ. ನಾನು 1 ನೇ ಪ್ರತಿವಾದಿಯ ಮಾತು ಕೇಳಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ವಾದಿಯರು ನನ್ನ ಮಾವನ ಮಕ್ಕಳು ಇರುವ ಕಾರಣ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಸದರಿ 1 ನೇ ಪ್ರತಿವಾದಿಗೆ ಇಬ್ಬರು ಸಹೋದರರು. ಭೂಸಪ್ಪ ಮತ್ತು ಸೋಮಪ್ಪ ಇವರು ಯಾವಾಗ ವಾಟ್ನಿ ಮಾಡಿಕೊಂಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ದಾವಾ ಆಸ್ತಿ ಸರ್ವೆ ನಂ.68 ಇರುತ್ತದೆ. ದಾವಾ ಆಸ್ತಿಯು ವಾದಿಯ ಅಜ್ಜಿ ಆಸ್ತಿ ಎಂದು ಸಾಕ್ಷ್ಯಾ ಪ್ರಮಾಣ ಪತ್ರದಲ್ಲಿ ಬರೆಸಿರುತ್ತೇನೆ ಎಂದರೆ ಸರಿ. ವಾದಿಯ ಅಜ್ಜಿ ಆಸ್ತಿ ಎಂದರೆ ಸ್ತ್ರೀಧನ ಆಸ್ತಿ ಇರುತ್ತದೆ ಎಂದರೆ ಸಾಕ್ಷಿಯು ಅದರ ಬಗ್ಗೆ ನನಗೆ ಗೊತ್ತಿಲ್ಲವೆಂದು ನುಡಿಯುತ್ತಾರೆ. ದಾವಾ ಆಸ್ತಿಯು ಸ್ತ್ರೀಧನ ಆಸ್ತಿ ಇರುವುದರಿಂದ ವಾದಿಯರಿಗೆ ಯಾವುದೇ ಪಾಲು ಸಿಗುವುದಿಲ್ಲ ಎಂದರೆ ಸರಿಯಲ್ಲ.

ನಾನು ದಾವಾ ಸ್ವತ್ತಿನ ದಾಖಲೆಗಳನ್ನು ನೋಡಿರುತ್ತೇನೆ. ದಿಃ02.03.2012 ರಂದು 1 ನೇ ಪ್ರತಿವಾದಿಯು ದಾವಾ ಆಸ್ತಿಯನ್ನು 1,90,000/- ರೂ.ಗಳಿಗೆ 4 ನೇ ಪ್ರತಿವಾದಿಗೆ ಮಾರಾಟ ಮಾಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. 2014 ನೇ ಇಸವಿಯಲ್ಲಿ 4 ನೇ ಪ್ರತಿವಾದಿಯು 2,09,000/- ರೂ.ಗಳಿಗೆ 5 ನೇ ಪ್ರತಿವಾದಿಗೆ ಮಾರಾಟ ಮಾಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಖರೀದಿಯಂತೆ 2011-12 ನೇ ಇಸವಿಯಲ್ಲಿ 4 ನೇ ಪ್ರತಿವಾದಿಯ ಹೆಸರು ನಂತರ 2014 ರ ಖರೀದಿಯ ನಂತರ 5 ನೇ ಪ್ರತಿವಾದಿಯ ಹೆಸರು ದಾವಾ ಆಸ್ತಿಯ ಉತಾರಗಳಲ್ಲಿ ದಾಖಲಾಗಿರುತ್ತದೆ ಎಂದರೆ ನನಗೆ ಗೊತ್ತಿಲ್ಲ. ಸದರಿ 4 ನೇ ಪ್ರತಿವಾದಿಯು ದಾವಾ ಆಸ್ತಿಯನ್ನು ಮಾರಾಟ ಮಾಡುವಾಗ ವಾದಿಯರು, ಪ್ರತಿವಾದಿ



ನಂ.2 ಮತ್ತು 3 ರವರು ತಕರಾರು ಮಾಡಿಲ್ಲ ಎಂದರೆ ನನಗೆ ಗೊತ್ತಿಲ್ಲ. 5 ನೇ ಪ್ರತಿವಾದಿಯು ದಾವಾ ಆಸ್ತಿಯನ್ನು ದಿಃ10.01.2018 ರಂದು 4,05,000/- ರೂ.ಗಳಿಗೆ 6 ನೇ ಪ್ರತಿವಾದಿಗೆ ಮಾರಾಟ

ಮಾಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಸದರಿ ಖರೀದಿಯಂತೆ 6 ನೇ ಪ್ರತಿವಾದಿಯ ಹೆಸರು ದಾವಾ ದಾಖಲೆಗಳಲ್ಲಿ ದಾಖಲಾಗಿರುತ್ತದೆ ಎಂದರೆ ನನಗೆ ಗೊತ್ತಿಲ್ಲ. ದಿಃ06.08.2019 ರಂದು 6 ನೇ ಪ್ರತಿವಾದಿಯು ದಾವಾ ಆಸ್ತಿಯನ್ನು 3,70,000/- ರೂ.ಗಳಿಗೆ 7 ನೇ ಪ್ರತಿವಾದಿಗೆ ಮಾರಾಟ ಮಾಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಸದರಿ ಖರೀದಿಯ ಪ್ರಕಾರ ದಾವಾ ಆಸ್ತಿಯ ದಾಖಲೆಗಳಲ್ಲಿ 7 ನೇ ಪ್ರತಿವಾದಿಯ ಹೆಸರು ದಾಖಲಾಗಿರುತ್ತದೆ ಎಂದರೆ ನನಗೆ ಗೊತ್ತಿಲ್ಲ. 7 ನೇ ಪ್ರತಿವಾದಿಯು ದಾವಾ ಆಸ್ತಿಯನ್ನು ಖರೀದಿ ಮಾಡಿದಾಗಿನಿಂದ ಮಾಲ್ಕಿನಾತೆಯಿಂದ ಇವತ್ತಿನವರೆಗೂ ಕಬ್ಜಾ ವಹಿವಾಟನ್ನು ಮಾಡುತ್ತಾ ಬಂದಿರುತ್ತಾನೆ ಎಂದರೆ ನನಗೆ ಗೊತ್ತಿಲ್ಲ. ದಾವಾ ಆಸ್ತಿಯನ್ನು ನಾನು ನೋಡಿರುತ್ತೇನೆ. ದಾವಾ ಆಸ್ತಿಯ ಚಕಬಂದಿ ನನಗೆ ಹೇಳಲು ಬರುವುದಿಲ್ಲ. ನಾನು ಇಂಡಿ ಪಟ್ಟಣದಲ್ಲಿ ಖಾಯಂ ವಾಸಿಸುತ್ತೇನೆ ಎಂದರೆ ಸರಿ. ವಾದಿಯರು ಮತ್ತು ಪ್ರತಿವಾದಿ ನಂ.1 ರಿಂದ 3 ರವರು ನಮ್ಮ ಸಂಬಂಧಿಕರು ಎಂದರೆ ಸರಿ. 7 ನೇ ಪ್ರತಿವಾದಿಯು ಮುಗ್ಧ ಖರೀದಿದಾರನು ಇದ್ದು ಆತನಿಗೆ ನಷ್ಟ ಮಾಡಬೇಕು ಎನ್ನುವ ದುರುದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಆಸ್ತಿಯು 7 ನೇ ಪ್ರತಿವಾದಿಯ ಹೆಸರಿನಲ್ಲಿ ಇರುವ ಕಾರಣ ವಾದಿಯರಿಗೆ ಮತ್ತು 1 ರಿಂದ 3 ನೇ ಪ್ರತಿವಾದಿಯರಿಗೆ ಯಾವುದೇ ಹಕ್ಕು, ಪಾಲು ಇರುವುದಿಲ್ಲ ಎಂದರೆ ಸರಿಯಲ್ಲ.

1 ನೇ ಪ್ರತಿವಾದಿಗೆ ತನ್ನ ಮಕ್ಕಳ ಶಿಕ್ಷಣ ಮತ್ತು ಮದುವೆಯ ಖರ್ಚಿಗೆ ಪ್ರಾಪಂಚಿಕ ಅಡಚಣೆ ಇತ್ತು ಎಂದರೆ ಸರಿಯಲ್ಲ. ವಾದಿಯರ ಶಿಕ್ಷಣಕ್ಕೆ ಹಣದ ಅಡಚಣೆ ಇದ್ದ ಕಾರಣ 1 ನೇ ಪ್ರತಿವಾದಿಯು 4 ನೇ ಪ್ರತಿವಾದಿಗೆ ದಾವಾ ಆಸ್ತಿಯನ್ನು ಮಾರಾಟ ಮಾಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. 1 ನೇ ಪ್ರತಿವಾದಿಯು 4 ನೇ ಪ್ರತಿವಾದಿಗೆ ಮಾಡಿಕೊಟ್ಟ ಖರೀದಿ ಪತ್ರವನ್ನು ನಾನು ನೋಡಿಲ್ಲ. ವಾದಿಯರಿಗೆ 1/6 ನೇ ಭಾಗಾಂಶ ಪಾಲು ಬರುತ್ತದೆ ಎಂದು ಸುಳ್ಳು ಬರೆಸಿರುತ್ತೇನೆ ಎಂದರೆ ಸರಿಯಲ್ಲ. ದಾವೆಯ ಬಗ್ಗೆ ನನಗೆ ಯಾವುದೇ ಮಾಹಿತಿ ಇರದೇ ಇದ್ದರು ಸಹ ಸಂಬಂಧಿಕರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. 4 ರಿಂದ 6 ನೇ ಪ್ರತಿವಾದಿಯರು ನನಗೆ ಗೊತ್ತಿಲ್ಲ. 7 ನೇ ಪ್ರತಿವಾದಿಗೆ ಮಾಡಿಕೊಟ್ಟ ಖರೀದಿ ಪತ್ರವನ್ನು ನಾನು ನೋಡಿಲ್ಲ.

**<u>ಮರು ವಿಚಾರಣೆ: ಇಲ್ಲ:</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೆ. ಸರಿ ಇದೆ.

ಸಹಿ/-

ಜೆ.ಎಂ.ಎಫ್.ಸಿ. ನ್ಯಾಯಾಲಯ

ಇಂಡಿ.